**Akashvani : Bangalore**
**Regional Bulletin In Kannada**
**23.11.2024 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**23.11.2024 / 18.40 hrs**
**<><*<><>*><>**

<u>ಮುಖ್ಯಾಂಶಗಳು</u>

**೧. ವಿಧಾನಸಭಾ ಉಪಚುನಾವಣೆ ಶಿಗ್ಗಾಂವಿ, ಚನ್ನಪಟ್ಟಣ, ಸಂಡೂರಿನಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿನ ನಗೆ**

**೨. ಉಪಚುನಾವಣೆ ಗೆಲುವು ಸರ್ಕಾರದ ಜವಾಬ್ದಾರಿ ಮತ್ತಷ್ಟು ಹೆಚ್ಚಿಸಿದೆ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ಕೊನೆ ಘಳಿಗೆಯಲ್ಲಿ ಅಭ್ಯರ್ಥಿ ಘೋಷಣೆ ; ಚುನಾವಣಾ ತಂತ್ರ ರೂಪಿಸುವಲ್ಲಿ ವಿಫಲ ; ಸೋಲಿಗೆ ಕಾರಣ ಎಂದ ಬಿಜೆಪಿ**

**೪. ನಾಳೆ ಆಕಾಶವಾಣಿಯಲ್ಲಿ ಪ್ರಧಾನಿ ಮೋದಿ ಅವರ ಜನಪ್ರಿಯ ಮನದ ಮಾತು**

**೫. ಎಐ ತಂತ್ರಜ್ಞಾನ ಭವಿಷ್ಯದಲ್ಲಿ ಉದ್ಯೋಗಕ್ಕೆ ಬಹುದೊಡ್ಡ ಸವಾಲು ; ಬೆಂಗಳೂರು ಐಐಎಸ್‌ಸಿ ನಿರ್ದೇಶಕ ಪ್ರೊಫೆಸರ್ ರಂಗರಾಜನ್ ಅಭಿಮತ**

**<><*<><>*><>**

ರಾಜ್ಯದ ಶಿಗ್ಗಾಂವಿ, ಚನ್ನಪಟ್ಟಣ, ಸಂಡೂರು ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಜಯಭೇರಿ ಭಾರಿಸಿದೆ. ಚನ್ನಪಟ್ಟಣದಲ್ಲಿ ಕಾಂಗ್ರೆಸ್‌ನ ಸಿ.ಪಿ. ಯೋಗೇಶ್ವರ್, ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ವಿರುದ್ಧ ೨೫ ಸಾವಿರದ ೪೧೩ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಸಿ.ಪಿ. ಯೋಗೇಶ್ವರ್ ಒಂದು ಲಕ್ಷದ ೧೨ ಸಾವಿರದ ೬೪೨ ಮತ ಗಳಿಸಿದ್ದಾರೆ. ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹಮ್ಮದ್ ಖಾನ್ ಪಠಾಣ್ ೧೩ ಸಾವಿರದ ೪೪೮ ಮತಗಳ ಅಂತರದಿಂದ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ವಿರುದ್ಧ ಗೆಲುವು ಸಾಧಿಸಿದ್ದಾರೆ. ಯಾಸೀರ್ ಪಠಾಣ್ ಒಂದು ಲಕ್ಷದ ೭೫೬ ಮತ ಪಡೆದಿದ್ದಾರೆ.

**ಧ್ವನಿ: ಮಂಜುನಾಥ್**

ಸಂಡೂರಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಇ. ಅನ್ನಪೂರ್ಣ ೯ ಸಾವಿರದ ೬೪೯ ಮತಗಳ ಅಂತರದಿಂದ ಬಿಜೆಪಿ ಅಭ್ಯರ್ಥಿ ಬಂಗಾರು ಹನುಮಂತು ಅವರನ್ನು ಸೋಲಿಸಿದ್ದಾರೆ. ೯೩ ಸಾವಿರದ ೬೧೬ ಮತಗಳನ್ನು ಅನ್ನಪೂರ್ಣ ಪಡೆದಿದ್ದಾರೆ.

**<><*<><>*><>**

ವಿಧಾನಸಭಾ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಮತ ನೀಡಿ ಆಶೀರ್ವದಿಸಿದ ಶಿಗ್ಗಾಂವಿ, ಸಂಡೂರು ಹಾಗೂ ಚನ್ನಪಟ್ಟಣದ ಮತದಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಧನ್ಯವಾದ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗೆಲುವು ಸಾಧಿಸಿದ ಯಾಸೀರ್ ಅಹಮ್ಮದ್ ಖಾನ್, ಅನ್ನಪೂರ್ಣ ಹಾಗೂ ಸಿ.ಪಿ. ಯೋಗೇಶ್ವರ್ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಈ ಗೆಲುವು ನಮ್ಮ ಸರ್ಕಾರದ ಮೇಲಿನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ತಿಳಿಸಿದ್ದಾರೆ. ಈ ಚುನಾವಣೆ ಕಾಂಗ್ರೆಸ್ ಪಕ್ಷದ ಸತ್ಯ, ಬಿಜೆಪಿ-ಜೆಡಿಎಸ್ ಸುಳ್ಳುಗಳ ನಡುವಿನ ಚುನಾವಣೆಯಾಗಿತ್ತು. ಅಂತಿಮವಾಗಿ ಸತ್ಯ ಗೆದ್ದಿದೆ ಎಂದು ತಿಳಿಸಿದ್ದಾರೆ. ಎಲ್ಲಾ ಸುಳ್ಳು, ಅಪಪ್ರಚಾರಗಳಿಗೆ ರಾಜ್ಯದ ಜನತೆ ತಕ್ಕ ಉತ್ತರ ನೀಡಿದ್ದಾರೆ ಎಂದು ಹೇಳಿದ್ದಾರೆ.

**ಧ್ವನಿ : ಸಿದ್ದರಾಮಯ್ಯ**

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಮೂರು ಕ್ಷೇತ್ರಗಳಲ್ಲಿನ ಗೆಲುವು ೨೦೨೮ರ ವಿಧಾನಸಭಾ ಚುನಾವಣೆಗೆ ದಿಕ್ಸೂಚಿಯಾಗಿದೆ ಎಂದು ತಿಳಿಸಿದ್ದಾರೆ. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ, ಅಭಿವೃದ್ಧಿ ಕೆಲಸಗಳು ಹಾಗೂ ನಾಯಕರು ಮತ್ತು ಕಾರ್ಯಕರ್ತರ ಶ್ರಮದಿಂದ ಕಾಂಗ್ರೆಸ್ ಅಭ್ಯರ್ಥಿಗಳ ಗೆಲವು ಸಾಧ್ಯವಾಗಿದೆ ಎಂದು ಬೆಳಗಾವಿಯಲ್ಲಿ ತಿಳಿಸಿದ್ದಾರೆ.

<><*<><>*><>

ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಇಂದು ಬೆಳಗಾವಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಘೋಷಣೆ ಕೂಗಿ ಸಂಭ್ರಮ ಆಚರಿಸಿದರು. ಇನ್ನೊಂದೆಡೆ ಚಿಕ್ಕಬಳ್ಳಾಪುರದಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಜಯಬೇರಿ ಬಾರಿಸಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

<><*<><>*><>

ರಾಜ್ಯದ ಮೂರು ವಿಧಾನಸಭಾ ಉಪಚುನಾವಣೆಯಲ್ಲಿ ಜನರು ನೀಡಿರುವ ತೀರ್ಪನ್ನು ತಲೆಬಾಗಿ ಸ್ವೀಕಾರ ಮಾಡುವುದಾಗಿ ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಶಿಗ್ಗಾಂವಿ ಮತ್ತು ಚನ್ನಪಟ್ಟಣ ಕ್ಷೇತ್ರಗಳಲ್ಲಿ ಕೊನೆ ಘಳಿಗೆಯಲ್ಲಿ ಅಭ್ಯರ್ಥಿಗಳನ್ನು ಘೋಷಿಸಿದ್ದು, ಹಾಗೂ ಚುನಾವಣಾ ತಂತ್ರ ಮಾಡುವಲ್ಲಿ ಹಿಂದೆ ಬಿದ್ದಿದ್ದು, ಪಕ್ಷದ ಸೋಲಿಗೆ ಕಾರಣ ಎಂದು ಹೇಳಿದ್ದಾರೆ. ವಿಧಾನಸಭಾ ಉಪಚುನಾವಣೆಯಲ್ಲಿ ಮೂರು ಕ್ಷೇತ್ರಗಳ ಸೋಲಿನಿಂದ ನಿರಾಸೆಯಾಗಿರುವುದು ಸತ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರತಿಕ್ರಿಯಿಸಿದ್ದಾರೆ. ರಾಜ್ಯದಲ್ಲಿ ಅಧಿಕಾರದ ದುರುಪಯೋಗದಿಂದ ಕಾಂಗ್ರೆಸ್ ಮೂರು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಆರೋಪಿಸಿದ್ದಾರೆ.

<><*<><>*><>

ಚನ್ನಪಟ್ಟಣ ವಿಧಾನಸಭಾ ಉಪಚುನಾವಣೆಯ ಸೋಲನ್ನು ಸವಾಲಾಗಿ ಸ್ವೀಕರಿಸಲಾಗುವುದು ಎಂದು ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ. ರಾಮನಗರದಲ್ಲಿ ಮಾತನಾಡಿದ ಅವರು, ಸೋಲಿನ ಹೊಣೆಯನ್ನು ಸ್ವೀಕರಿಸುತ್ತೇನೆ ಎಂದು ಹೇಳಿದ್ದಾರೆ. ಕೊನೆ ಘಳಿಗೆಯಲ್ಲಿ ಅಭ್ಯರ್ಥಿ ಆಯ್ಕೆ ಸೋಲಿಗೆ ಕಾರಣ ಎಂದು ವಿಶ್ಲೇಷಿಸಿದ್ದಾರೆ. ಸೋಲಿನಿಂದ ಧೃತಿಗೆಡುವುದಿಲ್ಲ ಎಂದ ಅವರು, ಗ್ರಾಮೀಣ ಭಾಗದ ಮತದಾರರು ಪಕ್ಷಕ್ಕೆ ಬೆಂಬಲ ನೀಡಿದ್ದು, ಅವರ ಸೇವೆ ಮಾಡುವುದಾಗಿ ಸ್ಪಷ್ಟಪಡಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಾಳೆ ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೬ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಪ್ರಸಾರವಾಗಲಿದೆ., ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಎಐ ತಂತ್ರಜ್ಞಾನ ಭವಿಷ್ಯದಲ್ಲಿ ಬಹುದೊಡ್ಡ ಸವಾಲಾಗಲಿದ್ದು, ಬಹಳಷ್ಟು ಉನ್ನತ ಹುದ್ದೆಯ ಉದ್ಯೋಗಕ್ಕೆ ಹೊಡೆತ ಬೀಳಲಿದೆ ಎಂದು ಬೆಂಗಳೂರಿನ ವಿಜ್ಞಾನ ಸಂಸ್ಥೆ ನಿರ್ದೇಶಕ ಪ್ರೊಫೆಸರ್ ಗೋವಿಂದನ್ ರಂಗರಾಜನ್ ಅಭಿಪ್ರಾಯಪಟ್ಟಿದ್ದಾರೆ. ಸುರತ್ಕಲ್ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ೨೨ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆ ಭಾರೀ ಪರಿಣಾಮ ಬೀರಲಿದ್ದು ಇದನ್ನು ಎದುರಿಸಲು ಸಂಸ್ಥೆಗಳು ಸಜ್ಜಾಗಬೇಕಿದೆ ಎಂದು ತಿಳಿಸಿದ್ದಾರೆ.

ಕೋಡಿಂಗ್ ವ್ಯವಸ್ಥೆಯನ್ನು ಎಐ ಸ್ಪಷ್ಟವಾಗಿ ಮಾಡುವುದಲ್ಲದೇ ಚಿಪ್ ನಿರ್ಮಾಣಗಳಲ್ಲಿ ಶೇಕಡಾ ನೂರರಷ್ಟು ಸ್ಪಷತೆಯನ್ನು ನೀಡುತ್ತದೆ. ಇದು ಉದ್ಯೋಗ ಸೃಷ್ಟಿಯ ಮೇಲೆ ನೇರ ಪರಿಣಾಮ ಬೀರಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ. ಘಟಿಕೋತ್ಸವದಲ್ಲಿ ೪೦ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಪ್ರದಾನ ಮಾಡಲಾಯಿತು

**<><*<><>*><>**

ಮೈಸೂರು ನಗರದ ಅಭಿವೃದ್ಧಿಗೆ ವಿಸ್ಕೃತ ಯೋಜನೆ ರೂಪಿಸಲಾಗುವುದು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ ಮಹದೇವಪ್ಪ ತಿಳಿಸಿದ್ದಾರೆ. ಮೈಸೂರು ನಗರದ ಸಮಗ್ರ ಅಭಿವೃದ್ಧಿ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರು ಜನಸಂಖ್ಯೆ ೩ ಪಟ್ಟು ಹೆಚ್ಚಳ ಆಗಿದ್ದು, ಅದೇ ರೀತಿ ಮೂಲಭೂತ ಸೌಲಭ್ಯಗಳನ್ನು ನೀಡಬೇಕಾಗಿದೆ. ಈ ಹಿನ್ನೆಲೆಯಲ್ಲಿ ಸಲಹೆ ಸೂಚನೆಗಳನ್ನು ಸ್ವೀಕಾರ ಮಾಡಲಾಗುವುದು ಎಂದು ಹೇಳಿದ್ದಾರೆ. ಈಗಾಗಲೇ ನೀಡಿರುವ ಹಾಗೂ ಮುಂದೆ ನೀಡುವ ಸಲಹೆಗಳನ್ನು ಕ್ರೋಢಿಕರಿಸಿ ಮೈಸೂರು ಅಭಿವೃದ್ಧಿಗೆ ಪೂರಕವಾಗಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಕೋಲ್ ಇಂಡಿಯಾ ಕಂಪನಿಯ ಸಹಯೋಗದೊಂದಿಗೆ ಧಾರವಾಡದಲ್ಲಿ ನಿರ್ಮಿಸಲಾಗುತ್ತಿರುವ ವಸತಿ ನಿಲಯ ಮತ್ತು ಭೋಜನಾಲಯಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮುಂಬರುವ ಎರಡು ವರ್ಷದಲ್ಲಿ ಭಾರತ ಜಗತ್ತಿನ ೩ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂದು ತಿಳಿಸಿದರು. ಈ ಹಿನ್ನೆಲೆಯಲ್ಲಿ ಅಗತ್ಯ ಮಾನವ ಸಂಪನ್ಮೂಲಕ್ಕಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸುವಂತೆ ಕರೆ ನೀಡಿದರು.

**<><*<><>*><>**

ಪ್ರಧಾನಮಂತ್ರಿ ವಿಶ್ವಕರ್ಮ ಕುಶಲಕರ್ಮಿಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ವಾಣಿಜ್ಯನಗರಿ ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ರೀಜನಲ್ ಮ್ಯಾನೇಜರ್ ಮೋಹನ ಪಾಟೀಲ, ಕುಶಲ ಕರ್ಮಿಗಳಿಗೆ ಇದೊಂದು ಒಳ್ಳೆಯ ವೇದಿಕೆಯಾಗಿದೆ ಎಂದು ತಿಳಿಸಿದರು.ಆಕಾಶವಾಣಿಯೊಂದಿಗೆ ಪಿಎಂ ವಿಶ್ವಕರ್ಮ ಯೋಜನೆಯ ಫಲಾನುಭವಿ, ಪ್ರಕಾಶ್ ಮಾದರ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ಫಲಾನುಭವಿ, ಪ್ರಕಾಶ್ ಮಾದರ**

**<><*<><>*><>**

**ಸಂಕ್ಷಿಪ್ತ ಸುದ್ದಿಗಳು**

೧. ದೈಹಿಕ ವಿಕಲತೆ ಹೊಂದಿದವರು ಅಂಗವಿಕಲರಲ್ಲ. ಎಲ್ಲ ಇದ್ದು, ಸೋಮಾರಿಗಳಾಗಿ ಇರುವವರು ನಿಜವಾಗಿಯೂ ಅಂಗವಿಕಲರು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಅಭಿಪ್ರಾಯಪಟ್ಟಿದ್ದಾರೆ.

೨. ಪರಂಪರಾಗತವಾಗಿ ಮಂತ್ರಾಲಯ ಮಹಾ ಸಂಸ್ಥಾನಕ್ಕೆ ಸೇರಿದ ಶ್ರೀಮೂಲರಾಮದೇವರನ್ನು ಮರಳಿ ಶ್ರೀಮಠಕ್ಕೆ ತಂದುಕೊಟ್ಟವರು ಶ್ರೀರಘುನಂದನ ತೀರ್ಥರು ಎಂದು ಮಂತ್ರಾಲಯ ಶ್ರೀರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿಗಳಾದ ಶ್ರೀಸುಬುಧೇಂದ್ರ ತೀರ್ಥ ವಿಜಯನಗರದಲ್ಲಿಂದು ತಿಳಿಸಿದ್ದಾರೆ.

೩. ಕೆಲವೊಂದು ಮನೆಗಳಲ್ಲಿ ಶೌಚಾಲಯ ಇದ್ದರೂ ಉಪಯೋಗ ಮಾಡುತ್ತಿಲ್ಲ. ಅಂತಹ ಕಡೆಗಳಲ್ಲಿ ಜಾಗೃತಿ ಮೂಡಿಸುವಂತೆ ಬಾಗಲಕೋಟೆ ಜಿಲ್ಲಾ ಪಂಚಾಯತ್ ಸಿಇಓ ಶಶಿಧರ ಕುರೇರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೪. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಡಿಸೆಂಬರ್ ೧೪ ರಂದು ರಾಷ್ಟ್ರೀಯ ಲೋಕ್ ದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ವಿವಿಧ ರೀತಿಯ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ.

೫. ಕೋಲಾರ ನೌಕರರ ಸಂಘದ ಚುನಾವಣೆಯಲ್ಲಿ ತಾವು ಹಸ್ತಕ್ಷೇಪ ಮಾಡುವುದಿಲ್ಲ ಎಂದು ಶಾಸಕ ಕೊತ್ತೂರು ಮಂಜುನಾಥ್ ತಿಳಿಸಿದ್ದಾರೆ.

೬. ಇಂದಿನ ಯುವ ಪೀಳಿಗೆಯು ಮೊಬೈಲ್ ಎಂಬ ಮಾಯಾಜಾಲದಲ್ಲಿ ಮುಳುಗಿ ಹೋಗುತ್ತಿರುವುದು ಅತ್ಯಂತ ಕಳವಳ ಸಂಗತಿಯಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀ ಪ್ರಿಯಾ ಅಭಿಪ್ರಾಯಪಟ್ಟಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ <>*><>**